KARNATAK UNIVERSITY, DHARWAD
ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
Examination G.A.D. Section
ಪರೀಕ್ಷಾ ಸಾಮಾನ್ಯ ಆಡಳಿತ ವಿಭಾಗ
"NAAC Accredited with "A" Grade 2022"

ಪಾವಟೆನಗರ, ಧಾರವಾಡ
Pavate Nagar, Dharwad

Tel Ph No. 0836-2215267
Web Site : www.kud.ac.in

ನಂ:/ಕವಿವಿ/ಪರೀಕ್ಷಾ/ಜಿಎಡಿ/2026/ 924

ದಿನಾಂಕ: 28/01/2026

# ಅಧಿಸೂಚನೆ

**ವಿಷಯ:** ಫೆಬ್ರುವರಿ/ಮಾರ್ಚ 2026 ರಲ್ಲಿ ಜರುಗುವ ಸ್ನಾತಕೋತ್ತರ ಎಂ.ಸಿ.ಎ/ಎಂ.ಬಿ.ಎ & ಎಂ.ಬಿ.ಎ. ಲಾಜಿಸ್ಟೀಕ್ ಮ್ಯಾನೇಜಮೆಂಟ್ 1 ಮತ್ತು 3 ನೇ ಸೆಮಿಸ್ಟರ್ (ರೆಗ್ಯೂಲರ್/ರಿಪೀಟರ್ಸ್) ವಿದ್ಯಾರ್ಥಿಗಳಿಗೆ ಪರೀಕ್ಷಾ ಅರ್ಜಿ/ಶುಲ್ಕ ತುಂಬುವ ಕುರಿತು.

**ಉಲ್ಲೇಖ:** ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 09/01/2026.

*****

ಸ್ನಾತಕೋತ್ತರ ಎಂ.ಸಿ.ಎ/ಎಂ.ಬಿ.ಎ & ಎಂ.ಬಿ.ಎ ಲಾಜಿಸ್ಟೀಕ್ ಮ್ಯಾನೇಜಮೆಂಟ್ 1 ಮತ್ತು 3 ನೇ ಸೆಮಿಸ್ಟರ್ ಪದವಿಯ ಪರೀಕ್ಷೆಗಳು ಫೆಬ್ರುವರಿ/ಮಾರ್ಚ 2026 ರಲ್ಲಿ ಜರುಗುವವು. ಸದರಿ ಪರೀಕ್ಷೆಗಳ ವಿವರವಾದ ವೇಳಾಪಟ್ಟಿಯನ್ನು UUCMS ತಂತ್ರಾಂಶದಲ್ಲಿ ಹಾಗೂ ಕ.ವಿ.ವಿ. ಅಂತರಜಾಲದಲ್ಲಿ ನಂತರ ಪ್ರಕಟಿಸಲಾಗುವುದು.

ಅಧ್ಯಕ್ಷರು ಸ್ನಾತಕೋತ್ತರ ಎಂ.ಬಿ.ಎ/ಎಂ.ಸಿ.ಎ ವಿಭಾಗ ಕವಿವಿ ಧಾರವಾಡ ಹಾಗೂ ಎಲ್ಲ ಎಂ.ಬಿ.ಎ. ಮಹಾವಿದ್ಯಾಲಯಗಳ ನಿರ್ದೇಶಕರು/ಪ್ರಾಚಾರ್ಯರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ, ಫೆಬ್ರುವರಿ/ಮಾರ್ಚ 2026 ರಲ್ಲಿ ಜರಗುವ ಸ್ನಾತಕೋತ್ತರ ಎಂ.ಬಿ.ಎ/ಎಂ.ಸಿ.ಎ/ಎಂ.ಬಿ.ಎ. ಲಾಜಿಸ್ಟೀಕ್ ಮ್ಯಾನೇಜಮೆಂಟ್ 1 ಮತ್ತು 3 ನೇ ಸೆಮಿಸ್ಟರ್ ಪದವಿಯ ಪರೀಕ್ಷೆಗಳಿಗೆ ವಿದ್ಯಾರ್ಥಿಗಳಿಂದ UUCMS ತಂತ್ರಾಂಶ ಮೂಲಕ ಪರೀಕ್ಷಾ ಅರ್ಜಿ/ಶುಲ್ಕಗಳನ್ನು ತುಂಬಿಸಿಕೊಳ್ಳುವಾಗ ಈ ಕೆಳಗಿನ ವಿವರವಾದ ಸೂಚನೆಗಳನ್ನು ಹಾಗೂ ಕೊನೆಯ ದಿನಾಂಕವನ್ನು ಗಮನಿಸಬೇಕು. ಪರೀಕ್ಷಾ ವಿಭಾಗಕ್ಕೆ ಅರ್ಜಿಗಳನ್ನು ಸಲ್ಲಿಸುವಾಗ ಪಾವತಿಸಿದ ಮೂಲ ಚಲನ್ ಪ್ರತಿ ಹಾಗೂ ಅಗತ್ಯ ದಾಖಲೆಗಳ ಝರಾಕ್ಸ ಪ್ರತಿಗಳನ್ನು ಲಗತ್ತಿಸಿ ಸಲ್ಲಿಸಬೇಕು.

1. **ದಿನಾಂಕ:29/01/2026** ರಿಂದ ವಿದ್ಯಾರ್ಥಿಗಳು ಪರೀಕ್ಷಾ ಅರ್ಜಿಯನ್ನು UUCMS ತಂತ್ರಾಂಶದ ಆನಲೈನ್ ಮುಖಾಂತರ ಪರೀಕ್ಷಾ ಶುಲ್ಕ ಭರಿಸಿ ವಿಭಾಗಕ್ಕೆ/ಕೇಂದ್ರಕ್ಕೆ/ಮಹಾವಿದ್ಯಾಲಯಕ್ಕೆ ದಂಡವಿಲ್ಲದೆ ಅರ್ಜಿ ಸಲ್ಲಿಸಲು ಕೊನೆಯ **ದಿನಾಂಕ:04/02/2026.**
2. ವಿದ್ಯಾರ್ಥಿಗಳು **ರೂ.200/-** ಮೊದಲನೆಯ ದಂಡದೊಂದಿಗೆ ಪರೀಕ್ಷಾ ಅರ್ಜಿಯನ್ನು UUCMS ತಂತ್ರಾಂಶದ ಆನಲೈನ್ ಮುಖಾಂತರ ಪರೀಕ್ಷಾ ಶುಲ್ಕ ಭರಿಸಿ ವಿಭಾಗಕ್ಕೆ/ಕೇಂದ್ರಕ್ಕೆ/ಮಹಾವಿದ್ಯಾಲಯಕ್ಕೆ ಅರ್ಜಿ ಸಲ್ಲಿಸಲು ಕೊನೆಯ **ದಿನಾಂಕ:05/02/2026.**
3. ವಿದ್ಯಾರ್ಥಿಗಳು **ರೂ.220/-** ಎರಡನೆಯ ದಂಡದೊಂದಿಗೆ ಪರೀಕ್ಷಾ ಅರ್ಜಿಯನ್ನು UUCMS ತಂತ್ರಾಂಶದ ಆನಲೈನ್ ಮುಖಾಂತರ ಪರೀಕ್ಷಾ ಶುಲ್ಕ ಭರಿಸಿ ವಿಭಾಗಕ್ಕೆ/ಕೇಂದ್ರಕ್ಕೆ/ಮಹಾವಿದ್ಯಾಲಯಕ್ಕೆ ಅರ್ಜಿ ಸಲ್ಲಿಸಲು ಕೊನೆಯ **ದಿನಾಂಕ:06/02/2026.**
4. ಅಧ್ಯಕ್ಷರು ಸ್ನಾತಕೋತ್ತರ ಎಂ.ಬಿ.ಎ ಮತ್ತು ಎಂ.ಸಿ.ಎ. ವಿಭಾಗ ಕವಿವಿ ಧಾರವಾಡ ಹಾಗೂ ಎಲ್ಲ ಎಂ.ಬಿ.ಎ. ಮಹಾವಿದ್ಯಾಲಯಗಳ ನಿರ್ದೇಶಕರು/ಪ್ರಾಚಾರ್ಯರು ಎಲ್ಲ ವಿದ್ಯಾರ್ಥಿಗಳಿಂದ UUCMS ತಂತ್ರಾಂಶದ ಮೂಲಕ ದಂಡವಿಲ್ಲದೆ ಹಾಗೂ ದಂಡದೊಂದಿಗೆ ಸ್ವೀಕರಿಸಿದ ಪರೀಕ್ಷಾ ಅರ್ಜಿಗಳನ್ನು ಪರಿಶೀಲಿಸಿ ವಿಶ್ವವಿದ್ಯಾಲಯಕ್ಕೆ ಸಲ್ಲಿಸಲು ಕೊನೆಯ **ದಿನಾಂಕ:07/02/2026.**

ಪು.ತಿ.ನೋ

## ಪರೀಕ್ಷಾ ಶುಲ್ಕದ ವಿವರಗಳು

| ಅ. ನಂ. | ವಿವರ | ಶುಲ್ಕ ರೂ |
|---|---|---|
| 01 | ಪರೀಕ್ಷಾ ಅರ್ಜಿ ಶುಲ್ಕ | 110/- |
| 02 | ಅಂಕಪಟ್ಟಿ ಶುಲ್ಕ | 160/- |
| 03 | **ಪರೀಕ್ಷಾ ಶುಲ್ಕ:** ಎಂ.ಬಿ.ಎ / ಎಂ.ಬಿ.ಎ. ಲಾಜಿಸ್ಟಿಕ್ ಮ್ಯಾನೇಜಮೆಂಟ್ 1 ಮತ್ತು 3 ನೇ ಸೆಮಿಸ್ಟರ್ | 2680/- |
| 04 | **ಪರೀಕ್ಷಾ ಶುಲ್ಕ:** ಎಂ.ಸಿ.ಎ 1 ಮತ್ತು 3 ನೇ ಸೆಮೆಸ್ಟರ್ | 3015/- |

### ವಿಶೇಷ ಸೂಚನೆಗಳು

1. ಕರ್ನಾಟಕ ವಿಶ್ವವಿದ್ಯಾಲಯ ವ್ಯಾಪ್ತಿಯ ಎಲ್ಲ ಮಹಾವಿದ್ಯಾಲಯಗಳು ಪ್ರತಿ ಶೈಕ್ಷಣಿಕ ವರ್ಷಕ್ಕೆ ಸಂಯೋಜನೆಯನ್ನು ಪಡೆಯುವದು ಕಡ್ಡಾಯವಾಗಿರುತ್ತದೆ. ಕೆಲವೊಂದು ಮಹಾವಿದ್ಯಾಲಯಗಳಿಂದ ಸಂಯೋಜನೆಯ ಅಧಿಸೂಚನೆಯನ್ನು ಪಡೆಯದೇ ವಿದ್ಯಾರ್ಥಿಗಳ ಪ್ರವೇಶ ಯಾದಿಯನ್ನು ಹಾಗೂ ವಿದ್ಯಾರ್ಥಿಗಳ ಪರೀಕ್ಷಾ ಅರ್ಜಿಗಳನ್ನು ಪರೀಕ್ಷಾ ವಿಭಾಗಕ್ಕೆ ಸಲ್ಲಿಸಿರುವುದನ್ನು ಗಮನಿಸಲಾಗಿದೆ ಸಂಯೋಜನೆಯ ಅಧಿಸೂಚನೆಯನ್ನು ಪಡೆಯದೆ ಇದ್ದಲ್ಲಿ ಮಹಾವಿದ್ಯಾಲಯಗಳಲ್ಲಿ ವ್ಯಾಸಂಗ ಕ್ರಮಗಳನ್ನು ಮುಂದುವರೆಸುವದಕ್ಕೆ/ವಿಸ್ತರಿಸುವದಕ್ಕೆ ಮಾನ್ಯತೆ ಇರುವುದಿಲ್ಲ ಹಾಗೂ ಅಂತಹ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿ ತುಂಬಲು ಸಹ ಅರ್ಹರಿರುವುದಿಲ್ಲ. ಆದ್ದರಿಂದ ಪರೀಕ್ಷಾ ಅರ್ಜಿಗಳನ್ನು ವಿಶ್ವವಿದ್ಯಾಲಯದ ಪರೀಕ್ಷಾ ವಿಭಾಗಕ್ಕೆ ಸಲ್ಲಿಸುವಾಗ ಸಿಡಿಸಿ/ಸಂಯೋಜನೆ ವಿಭಾಗದಿಂದ ಪಡೆದ ಪ್ರಸಕ್ತ ವರ್ಷದ ಅಧಿಸೂಚನೆಯನ್ನು ಕಡ್ಡಾಯವಾಗಿ ಲಗತ್ತಿಸುವದು.
2. ಸ್ನಾತಕೋತ್ತರ (ಸಿಬಿಸಿಎಸ್) ಕಾಯಿದೆ (Regulation) 9.1.6 ಪ್ರಕಾರ ಅನುತ್ತೀರ್ಣರಾದ ವಿದ್ಯಾರ್ಥಿಗಳು ಹಾಗೂ ಅಂಕಸುಧಾರಣೆ ಬಯಸುವ ವಿದ್ಯಾರ್ಥಿಗಳು ನಿಯಮಿತ (ರೆಗ್ಯುಲರ) ವಿದ್ಯಾರ್ಥಿಯಾಗಿ ಕೋರ್ಸ/ಕೋರ್ಸಗಳನ್ನು ಮುಗಿಸಿದ ನಂತರದ ಎರಡು ಪರೀಕ್ಷೆಗಳಿಗೆ ಕುಳಿತುಕೊಳ್ಳಬಹುದು. ಅಂತಹ ವಿದ್ಯಾರ್ಥಿಗಳು ಪರೀಕ್ಷಾ ಫಾರ್ಮ/ಶುಲ್ಕ ತುಂಬಲು ಅರ್ಹರಾಗಿರುತ್ತಾರೆ. ಅಲ್ಲದೇ ಯಾವ ವಿಷಯದಲ್ಲಿ ತಮ್ಮ ಅಂಕಗಳ ಸುಧಾರಣೆಗೆ ಬಯಸಿ ಪರೀಕ್ಷೆಗೆ ಕುಳಿತಾಗ ಅಂಕಗಳು ಕಡಿಮೆ ಬಂದರೆ ಹಿಂದಿನ ಪರೀಕ್ಷೆಯಲ್ಲಿ ಪಡೆದುಕೊಂಡಿರುವ ಅಂಕಗಳು ಅದೇ ರೀತಿ ಇದ್ದರೆ ಅದನ್ನು ಉಳಿಸಿಕೊಳ್ಳಬಹುದು.

### ಸೂಚನೆಗಳು

1. **UUCMS** ತಂತ್ರಾಂಶ/ಕ.ವಿ.ವಿ. ಅಂತರಜಾಲದ ಮೂಲಕ ವಿದ್ಯಾರ್ಥಿಗಳು ಸಲ್ಲಿಸಿದ ಪರೀಕ್ಷಾ ಅರ್ಜಿಗಳನ್ನು ಸಂಬಂಧಪಟ್ಟ ಎಲ್ಲ ವಿಭಾಗದವರು/ಕೇಂದ್ರದವರು/ ಮಹಾವಿದ್ಯಾಲಯಗಳ ಪ್ರಾಚಾರ್ಯರು ಈ ಮುಂದಿನ ಷರತ್ತುಗಳಿಗೆ ಒಳಪಟ್ಟು ಸಹಿ ಮಾಡಬೇಕು. ಪ್ರತಿ ಸೆಮೆಸ್ಟರ/ನಾನ್ ಸೆಮೆಸ್ಟರ ಪ್ರತಿ ವಿಷಯದಲ್ಲೂ ಕನಿಷ್ಠ 75% ಹಾಜರಾತಿಯನ್ನು ಪೂರೈಸದ ವಿದ್ಯಾರ್ಥಿಗಳಿಗೆ ಪರೀಕ್ಷಾ ಅರ್ಜಿ ನಮೂನೆಗಳನ್ನು ರದ್ದುಪಡಿಸುವ ಷರುತ್ತುಗಳಿಗೆ ಒಳಪಟ್ಟಿರುತ್ತದೆ. ಎಲ್ಲ ವಿಭಾಗದವರು/ ಕೇಂದ್ರದವರು/ ಮಹಾವಿದ್ಯಾಲಯಗಳ ಪ್ರಾಚಾರ್ಯರ ಕೋರಿಕೆಯ ಮೇರೆಗೆ ಅಂತಹ ವಿದ್ಯಾರ್ಥಿಗಳ ಪರೀಕ್ಷೆಯ ಪ್ರವೇಶ ಪತ್ರಗಳನ್ನು (ಹಾಲ್ ಟಿಕೆಟ) ಫ್ರೀಜ್/ತಡೆಹಿಡಿಯಲಾಗುತ್ತದೆ. ಅಂತಹ ವಿದ್ಯಾರ್ಥಿಗಳಿಗೆ ಅಂತರ್ಜಾಲದಲ್ಲಿ ಭರ್ತಿ ಮಾಡಿದ ಪರೀಕ್ಷಾ ಅರ್ಜಿಯ ಆಧಾರದ ಮೇಲೆ ಪರೀಕ್ಷೆ ಬರೆಯಲು ಅವಕಾಶ ನೀಡುವದಿಲ್ಲ. ಯು.ಜಿ.ಸಿ ನಿಯಮಗಳ ಪ್ರಕಾರ ವಿದ್ಯಾರ್ಥಿಗಳು ಕಡ್ಡಾಯವಾಗಿ 75% ರಷ್ಟು ಹಾಜರಾತಿಯನ್ನು ಪೂರೈಸಿರಬೇಕು.
2. ಪರೀಕ್ಷಾ ಶುಲ್ಕದ ಜೊತೆಗೆ. ಪ್ರತಿ ವಿದ್ಯಾರ್ಥಿಯು **ರೂ.110/-**ನ್ನು ಅಂತರ್ಜಾಲದ ಪರೀಕ್ಷಾ ಅರ್ಜಿ ನಮೂನೆಯ ಪ್ರಕ್ರಿಯೆ ಶುಲ್ಕವನ್ನು (ಪ್ರತಿ ಸೆಮೆಸ್ಟರಗೆ) ಮತ್ತು ರೂ.**160/-**ನ್ನು ಅಂಕಪಟ್ಟಿ ಶುಲ್ಕವೆಂದು ಪಾವತಿಸಬೇಕಾಗುತ್ತದೆ.
3. **ಕರ್ನಾಟಕ ಸರ್ಕಾರವು SSP Portal ಮೂಲಕ SC/ST/Cat-I/II-A/II-B/III-A/III-B ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ನೇರವಾಗಿ ಅವರ ಖಾತೆಗೆ ವರ್ಗಾಯಿಸುವುದರಿಂದ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸುವುದು.**
4. ವಿಶ್ವವಿದ್ಯಾಲಯವು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಬರುವ ಯಾವುದೇ ಪರೀಕ್ಷಾ ಅರ್ಜಿಗಳನ್ನು ತೆಗೆದುಕೊಳ್ಳುವುದಿಲ್ಲ/ಪರಿಗಣಿಸಲಾಗುವದಿಲ್ಲ. ಅಲ್ಲದೆ, **UUCMS** ತಂತ್ರಾಂಶ/ಕ.ವಿ.ವಿ. ಅಂತರಜಾಲದ ಮೂಲಕ ಪರೀಕ್ಷಾ ಅರ್ಜಿ ನಮೂನೆಗಳನ್ನು ವಿದ್ಯಾರ್ಥಿಗಳು ಭರ್ತಿ ಮಾಡಲು ನೇರವಾಗಿ ಪರೀಕ್ಷಾ ವಿಭಾಗವನ್ನು ಸಂಪರ್ಕಿಸದಿರಲು ವಿದ್ಯಾರ್ಥಿಗಳಿಗೆ ತಿಳಿಸಲು ಸೂಚಿಸಲಾಗಿದೆ.

ಪು.ತಿ.ನೋ

5. ಎಲ್ಲ ವಿಭಾಗದವರು/ಕೇಂದ್ರದವರು/ಮಹಾವಿದ್ಯಾಯದ ಪ್ರಾಚಾರ್ಯರು ಎಲ್ಲ ವಿದ್ಯಾರ್ಥಿಗಳ ಮಾಹಿತಿಯ ಯಾದಿಯೊಂದಿಗೆ ಪರೀಕ್ಷಾ ಅರ್ಜಿಗಳನ್ನು (ಹಾರ್ಡಕಾಪಿ) ಅವಶ್ಯ ದಾಖಲೆಗಳೊಂದಿಗೆ/ನಕಲು (ಝರಾಕ್ಸ್) ಅಂಕಪಟ್ಟಿಗಳೊಂದಿಗೆ ನೇರವಾಗಿ ಸಂಬಂಧಪಟ್ಟ ಕಚೇರಿ ಅಧೀಕ್ಷಕರು, ಪರೀಕ್ಷಾ ವಿಭಾಗ, ವಿಶ್ವಚೇತನ ಬಿಲ್ಡಿಂಗ್, ಕರ್ನಾಟಕ ವಿಶ್ವವಿದ್ಯಾಲಯ, ಪಾವಟೆನಗರ, ಧಾರವಾಡ-580003 ಗೆ ಅಂಚೆ ಮೂಲಕ ಅಥವಾ ಖುದ್ದಾಗಿ ಎಲ್ಲ ವಿಭಾಗದವರು/ಕೇಂದ್ರದವರು/ಮಹಾವಿದ್ಯಾಲಯದವರು ಸಲ್ಲಿಸುವುದು.

6. **UUCMS** ತಂತ್ರಾಂಶ/ಕ.ವಿ.ವಿ. ಅಂತರಜಾಲದ ಮೂಲಕ ಪರೀಕ್ಷಾ ಅರ್ಜಿ ನಮೂನೆಗಳನ್ನು ತುಂಬಿಸುವಾಗ ತಿದ್ದುಪಡಿಯನ್ನು ತಪ್ಪಿಸಲು ಎಲ್ಲ ವಿಭಾಗದವರು/ಕೇಂದ್ರದವರು/ಮಹಾವಿದ್ಯಾಲಯದ ಸಿಬ್ಬಂದಿಗಳು ವಿದ್ಯಾರ್ಥಿಗಳಿಗೆ ನಿರ್ದೇಶನ ನೀಡುವುದು ಯಾವುದೇ ತಿದ್ದುಪಡಿಗಳು/ತಪ್ಪುಗಳು ಉಂಟಾದರೆ ಎಲ್ಲ ವಿಭಾಗದವರು/ಕೇಂದ್ರದವರು/ಮಹಾವಿದ್ಯಾಲಯದವರು ಜವಾಬ್ದಾರರಾಗಿರುತ್ತಾರೆ.

7. ಪರೀಕ್ಷೆಗೆ ಸಂಬಂದಿಸಿದಂತೆ ಶುಲ್ಕಗಳನ್ನು ವಿಶ್ವವಿದ್ಯಾಲಯಕ್ಕೆ ಭರಣ ಮಾಡಿದ ನಂತರ ಯಾವುದೇ ಕಾರಣಕ್ಕೂ ಮರಳಿ ಕೊಡುವದಿಲ್ಲ.

28/1

ಕುಲಸಚಿವರು(ಮೌಲ್ಯಮಾಪನ)

ಗೆ,

1) ಮುಖ್ಯಸ್ಥರು ಎಂ.ಬಿ.ಎ./ಎಂ.ಸಿ.ಎ ವಿಭಾಗ, ಕ.ವಿ.ವಿ.ಧಾರವಾಡ.
2) ಆಡಳಿತಾಧಿಕಾರಿಗಳು ಕ.ವಿ.ವಿ ಸ್ನಾತಕೋತ್ತರ ಕೇಂದ್ರ ಗದಗ.
3) ಕವಿವಿ ವ್ಯಾಪ್ತಿಯ ಎಲ್ಲ ಅಧೀನ ಹಾಗೂ ಸಂಲಗ್ನ ಮಹಾವಿದ್ಯಾಲಯಗಳ ನಿರ್ದೇಶಕರು/ಪ್ರಾಚಾರ್ಯರುಗಳಿಗೆ.

**ಪ್ರತಿಗಳು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ:**

1) ಹಣಕಾಸು ಅಧಿಕಾರಿಗಳು, ಹಣಕಾಸು ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
2) ಅಭಿವೃದ್ಧಿ ಅಧಿಕಾರಿಗಳು, ಅಂಕಿ ಸಂಖ್ಯೆ ವಿಭಾಗ/ ಶಿಷ್ಯವೇತನ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
3) ನಿರ್ದೇಶಕರು, ವಿದ್ಯಾರ್ಥಿ ಕಲ್ಯಾಣ ವಿಭಾಗ,/ಎಸ್‌ಸಿ/ಎಸ್‌ಟಿ/ಕೆ-1/ಓಬಿಸಿ ಘಟಕ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
4) ನಿರ್ದೇಶಕರು ಮಾಹಿತಿ ತಂತ್ರಜ್ಞಾನ ವಿಭಾಗ ಕ.ವಿ.ವಿ. ಧಾರವಾಡ. (**ಅಧಿಸೂಚನೆಯನ್ನು ಕ.ವಿ.ವಿ. ಅಂತರ್ಜಾಲದಲ್ಲಿ ಪ್ರಕಟಿಸುವುದು.**)
5) ಆಪ್ತಕಾರ್ಯದರ್ಶಿಗಳು, ಕುಲಪತಿಗಳು/ಕುಲಸಚಿವರು/ಕುಲಸಚಿವರು(ಮೌಲ್ಯಮಾಪನ)/ವಿತ್ತಾಧಿಕಾರಿಗಳು, ಕ ವಿ ವಿ, ಧಾರವಾಡ.
6) ಸಿಸ್ಟಮ್ ಎನಾಲಿಸ್ಟ್, ಪರೀಕ್ಷಾ ಗಣಕಯಂತ್ರ ವಿಭಾಗ, ಕ.ವಿ.ವಿ. ಧಾರವಾಡ.
7) ಉಪಕುಲಸಚಿವರು / ಸಹಾಯಕ ಕುಲಸಚಿವರು, ಪರೀಕ್ಷಾ/ ಹಣಕಾಸು / ವಿದ್ಯಾಮಂಡಳ ವಿಭಾಗ, ಕ ವಿ ವಿ, ಧಾರವಾಡ.
8) ಅಧೀಕ್ಷಕರು, ಹಣಕಾಸು/ ವಿದ್ಯಾಮಂಡಳ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
9) ಅಧೀಕ್ಷಕರು, ಪರೀಕ್ಷಾ ಗೌಪ್ಯ/ಪ್ರಶ್ನೆಪತ್ರಿಕೆ/ಪಿ.ಜಿ ವಿಭಾಗ, ಕ ವಿ ವಿ, ಧಾರವಾಡ